# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 177 |
| ಸದಸ್ಯರ ಹೆಸರು | : | ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 14-02-2023 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ತುಮಕೂರು ಮಹಾನಗರ ಪಾಲಿಕೆಯಲ್ಲಿ ಕಸವಿಲೇವಾರಿಗಾಗಿ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಖರೀದಿಸಿರುವ ಮಿನಿ ಟಿಪ್ಪರ್‌ಗಳ ಸಂಖ್ಯೆ ಎಷ್ಟು, ಖರೀದಿಸಲು ಯಾವ ಸಂಸ್ಥೆಗೆ ಅನುಮತಿ ನೀಡಲಾಗಿದೆ; ಬಿಡುಗಡೆಯಾಗಿರುವ ಅನುದಾನ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | ತುಮಕೂರು ಮಹಾನಗರ ಪಾಲಿಕೆಯಲ್ಲಿ ಸ್ವಚ್ಛ ಭಾರತ್ ಯೋಜನೆಯಡಿ ಘನತ್ಯಾಜ್ಯ ನಿರ್ವಹಣೆಗೆ ಅನುಮೋದಿತ ಸಂಗ್ರಹಣೆ ಹಾಗೂ ಸಾಗಾಣಿಕೆ ವಿಸ್ತೃತ ಯೋಜನೆ ರೀತ್ಯಾ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಬಿಡುಗಡೆ ಮಾಡಲಾಗಿರುವ ರೂ.5,49,63,000/- ಅನುದಾನದಲ್ಲಿ 93 ಸಂಖ್ಯೆಗಳ ಮಿನಿ ಟಿಪ್ಪರ್‌ಗಳನ್ನು ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಹಾಗೂ ಪಾರದರ್ಶಕತೆಕಾಯ್ದೆ 1999 ಮತ್ತು ಕೆ.ಟಿ.ಪಿ.ಪಿ ನಿಯಮ 2000ರಂತೆ ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಟೆಂಡರ್ ಆಹ್ವಾನಿಸಿ ಎಲ್-1 ಗುತ್ತಿಗೆದಾರರಾದ ಪ್ರೇರಣ ಮೋಟರ್ಸ್ ಸಂಸ್ಥೆ ರವರಿಗೆ ಸರಬರಾಜು ಕಾರ್ಯಾದೇಶ ನೀಡಲಾಗಿರುತ್ತದೆ. |
| ಆ) | ಕರ್ನಾಟಕ ಪಾರದರ್ಶಕ ಅಧಿನಿಯಮ ನಿಯಮಗಳನ್ನು ಪಾಲಿಸದೆ ಖರೀದಿಯಲ್ಲಿ ಅವ್ಯವಹಾರ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಹಾಗೂ ಪಾರದರ್ಶಕತೆ ಕಾಯ್ದೆ 1999 ಮತ್ತು ಕೆ.ಟಿ.ಪಿ.ಪಿ ನಿಯಮ 2000ರ ರೀತ್ಯಾ ನಿಯಮ ಪಾಲಿಸಲಾಗಿದೆ ಹಾಗೂ ಯಾವುದೇ ಅವ್ಯವಹಾರ ನಡೆದಿರುವುದಿಲ್ಲ. |
| ಇ) | ಬಂದಿದ್ದಲ್ಲಿ, ಅವ್ಯವಹಾರ ನಡೆದಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

ಸಂಖ್ಯೆ: ನಅಇ 09 ತುಮಪಾ 2023(ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು